ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಜೆಎಂಎಫ್‌ಸಿ ನ್ಯಾಯಾಲಯ, ಮುಧೋಳ

ಸಿ.ಸಿ ನಂ- 1022/2018

ಚಾಸಾ-1 ಪ್ರಾಸಾ-1

**ದಿನಾಂಕಃ 19-06-2023 ರಂದು ಸಾಕ್ಷಿಯನ್ನು ಕರೆದು ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು :- ಶ್ರೀ. ಎಸ್.ಸಿ.ಯು ಆರೋಪಿ ಪರ ವಕೀಲರಿಂದ :**

ನಾನು ಮನೆ ಕೆಲಸ ಮಾಡಿಕೊಂಡಿದ್ದೇನೆ. ಪಿರ್ಯಾದಿಯನ್ನು ಪೊಲೀಸರೇ ಟೈಪ ಮಾಡಿಕೊಂಡಿರುತ್ತಾರೆ. ಮಾಹಿತಿ ನಾನು ನೀಡಿರುತ್ತೇನೆ. ನಾನು 10 ನೇ ತರಗತಿವರೆಗೆ ವಿದ್ಯಾಭ್ಯಾಸ ಮಾಡಿದ್ದು, ಕನ್ನಡ ಓದಲು ಬರೆಯಲು ಬರುತ್ತದೆ. ಪಿರ್ಯಾದಿಯನ್ನು ನಾನೇ ಕೈಯಿಂದ ಬರೆದು ಕೊಡಲು ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿ. ಘಟನೆಯ ಬಗ್ಗೆ ಅಂದರೆ ಹೇಗೆ, ಯಾರು ಮಾಡಿದರು ಎಂದು ವೈಯಕ್ತಿಕವಾಗಿ ಮಾಹಿತಿ ಇರಲಿಲ್ಲ ಎಂದರೆ ಸರಿ. ಗುನ್ನಾ ಸ್ಥಳ ನಮ್ಮ ಮನೆಯ ಅಕ್ಕಪಕ್ಕ ಸಾಕಷ್ಟು ಮನೆಗಳಿವೆ ಎಂದರೆ ಸರಿ. ಅಲ್ಲಿ ಸಾಕಷ್ಟು ಬೆಳಕಿನ ವ್ಯವಸ್ಥೆ ಇದೆ ಎಂದರೆ ಸರಿ. ನಾನು ನನ್ನ ಮನೆಯಲ್ಲಿ ಬಂಗಾರದ ಆಭರಣ ಮತ್ತು ಹಣ ಇಟ್ಟ ಬಗ್ಗೆ ಅವುಗಳ ಮೌಲ್ಯಗಳ ಬಗ್ಗೆ ನ್ಯಾಯಾಲಯಕ್ಕೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ. ಸಾಮಾನ್ಯವಾಗಿ ಮಹಿಳೆಯರು ತಮ್ಮ ಒಡವೆಗಳನ್ನು ಒಂದೇ ಕಡೆಗೆ ಇಟ್ಟು ಲಾಕ್ ಮಾಡುತ್ತಾರೆ ಎಂದರೆ ಸರಿ. ಮುಂದುವರೆದು ಸಾಕ್ಷಿಯು ತಾನು ಊರಿಗೆ ಹೋಗುತ್ತಿದ್ದ ಕಾರಣ ಬೇರೆ ಬೇರೆ ಕಡೆಗೆ ಇಟ್ಟಿದ್ದೆ ಎಂದು ನುಡಿಯುತ್ತಾರೆ. ನಾನು ನನ್ನ ಮುಖ್ಯವಿಚಾರಣೆಯಲ್ಲಿ ಹೇಳಿದ ಹಾಗೇ ಒಡವೆ ಮತ್ತು ಹಣ ನನ್ನ ಮನೆಯಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯವಿಚಾರಣೆಯಲ್ಲಿ ಹೇಳಿದ ಹಾಗೇ ಒಡವೆಗಳು ಮಾರುಕಟ್ಟೆಯಲ್ಲಿ ಸದಾಕಾಲ ಸಿಗುತ್ತವೆ ಎಂದರೆ ಸರಿ. ಚಾಸಾ-೧೩ ರವರು ನಮ್ಮ ಮನೆ ಕಳ್ಳತನ ಆದ ಬಗ್ಗೆ ನನಗೆ ತಿಳಿಸಿರುತ್ತಾರೆ. ನನ್ನ ಸಮಕ್ಷಮ ಪಂಚನಾಮೆ ಜರುಗಿಸಿ ನನ್ನ ಸಹಿ ಪಡೆದುಕೊಂಡರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರನ್ನು ನಾನು ನನ್ನ ಮುಖ್ಯವಿಚಾರಣೆ ಕಾಲಕ್ಕೆ ಮೊದಲ ಬಾರಿ ನೋಡಿದ್ದೇನೆಂದರೆ ಸರಿಯಲ್ಲ. ಪೊಲೀಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ನನ್ನ ಮುಖ್ಯವಿಚಾರಣೆಯಲ್ಲಿ ಸಂಗತಿ ಸುಳ್ಳು ಎಂದರೆ ಸರಿಯಲ್ಲ. ಆರೋಪಿತರಿಗೂ ಮತ್ತು ಪ್ರಕರಣಕ್ಕು ಯಾವುದೇ ಸಂಬಂಧ ಇಲ್ಲದಿದ್ದರೂ ಸಹಿತ ಅವರ ವಿರುದ್ಧ ಸುಳ್ಳು ಸಾಕ್ಷ್ಯ ಹೆಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಯಾವುದೇ ಪುನಃ ಹೇಳಿಕೆ ನೀಡಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ನ್ಯಾಯಾಧೀಶರು ವ ಜೆಎಂಎಫ್‌ಸಿ
ಮುಧೋಳ.

ಸಾಕ್ಷಿಯ ಸಹಿ